# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಸಂಖ್ಯೆ | : | 885 |
| ಸದಸ್ಯರ ಹೆಸರು | : | ಶ್ರೀ.ನಸೀರ್ ಅಹ್ಮದ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 24-02-2022. |
| ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿಯವರು. |

| ಕ್ರ.ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ. | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲಾಗಿದೆಯೇ; ಇಲ್ಲದಿದ್ದಲ್ಲಿ, ರಚಿಸದೇ ಇರಲು ಕಾರಣವೇನು; | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಎಂಡಬ್ಲ್ಯೂಡಿ 154 ಎಂಡಿಎಸ್ 2010, ದಿನಾಂಕ:15.03.2011ರಲ್ಲಿ ರಚಿಸಲಾಗಿರುತ್ತದೆ.<br><br>2011ರ ನಂತರ ಹೊಸದಾಗಿ ಸೃಜಿಸಿ ಮಂಜೂರಾಗಿರುವ ಸುಮಾರು 50 ವಿವಿಧ ವೃಂದಗಳ ಹುದ್ದೆಗಳನ್ನು ಸೇರಿಸಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. |
| ಆ. | ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿ ಜಿಲ್ಲಾ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ಅಧಿಕಾರಿಗಳು, ತಾಲ್ಲೂಕು ಅಧಿಕಾರಿಗಳು, ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಮುಖ್ಯೋಪಾಧ್ಯಾಯರು, ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವಕಾಲೇಜು ಪ್ರಾಚಾರ್ಯರು, ಮೌಲಾನಾ ಆಜಾದ್ ಮಾದರಿ ಆಂಗ್ಲಮಾಧ್ಯಮ ಶಾಲೆಯ ಪ್ರಾಚಾರ್ಯರ ಹುದ್ದೆಗಳು ಒಂದೇ ಪದನಾಮ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ರೀತಿಯ ವ್ಯವಸ್ಥೆಯಲ್ಲಿ ಸಿಬ್ಬಂದಿಗಳು ಕಾರ್ಯನಿರ್ವಹಿಸಲು ಮುಜುಗರವಾಗುವುದಿಲ್ಲವೇ; | ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿ ಜಿಲ್ಲಾ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಅಧಿಕಾರಿ ವರ್ಗ, ಮೊರಾರ್ಜಿದೇಸಾಯಿ, ಮೌಲಾನಾ ಆಜಾದ್ ಶಾಲೆಗಳ ಪ್ರಾಚಾರ್ಯರುಗಳಿಗೆ ಪ್ರತ್ಯೇಕ ಪದನಾಮ ನೀಡುವ ಕುರಿತು ದಿನಾಂಕ:07.07.2021 ರಂದು ನಡೆಸಲಾದ ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆಯ ಉಪ ಸಮಿತಿ ಸಭೆಯಲ್ಲಿ ಕೈಗೊಂಡ ನಿರ್ಣಯದಂತೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. |
| ಇ. | ಸದರಿ ಶಾಲಾ ಕಾಲೇಜುಗಳ ಮುಖ್ಯಸ್ಥರು ಮತ್ತು ಜಿಲ್ಲಾ ಹಾಗೂ ತಾಲ್ಲೂಕು ಅಧಿಕಾರಿಗಳ ಪದನಾಮ ಬದಲಾವಣೆ ಮಾಡುವುದರ ಕುರಿತು ಸರ್ಕಾರಕ್ಕೆ ಇರುವ ತೊಂದರೆಯೇನು; ಜಿಲ್ಲಾ ಮಟ್ಟದಲ್ಲಿ ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದನ್ನು ಯಾವಾಗ ಸರಿಪಡಿಸಲಾಗುವುದು? | |

**ಸಂಖ್ಯೆ : MWD 67 LMQ 2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ